**FEBRUARY 9,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಮಹಿಳೆಯರನ್ನು ಪ್ರಮುಖ ಫಲಾನುಭವಿಗಳನ್ನಾಗಿ ಕೇಂದ್ರೀಕರಿಸಿ, ರಾಜ್ಯದಲ್ಲಿ ಜಾರಿಗೊಳಿಸಿರುವ, ಐದು ಗ್ಯಾರಂಟಿ ಯೋಜನೆಗಳ ಮೂಲಕ, ಕರ್ನಾಟಕ, ಲಿಂಗ ಸಮಾನತೆ ಸಾಧಿಸುವಲ್ಲಿ, ಸುದೃಢ ಹೆಜ್ಜೆ ಇರಿಸಿದೆ ಎಂದು, ವಿಶ್ವ ಸಂಸ್ಥೆ ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮೋನ್ ಯಾಂಗ್ ಶ್ಲಾಘಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಅವರು ಪಾಲ್ಗೊಂಡು, ಮಾತನಾಡಿದರು. ಶೇಕಡ 40ರ ಷ್ಟ ಇಂಧನ ಬೇಡಿಕೆಯನ್ನು, ಕರ್ನಾಟಕ ಶುದ್ಧ ಮತ್ತು ನವೀಕರಿಸಬಹುದಾದ ಮೂಲಗಳಿಂದ ಪೂರೈಸಿಕೊಳ್ಳುವಷ್ಟು, ಕ್ಷಮತೆ ಸಾಧಿಸಿದ್ದು ಅಭಿನಂದನೀಯ ಎಂದು, ಯಾಂಗ್ ಸಂತಸ ವ್ಯಕ್ತಪಡಿಸಿದರು.**

<><><>

**ಬೆಳಗಾವಿಯ ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯದ, 24ನೇ ಸ್ನಾತಕೋತ್ತರ ವಾರ್ಷಿಕ ಘಟಿಕೋತ್ಸವ, 'ಜ್ಞಾನ ಸಂಗಮ' ಆವರಣದ, ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ಜರುಗಿತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು, ಪದವಿಗಳನ್ನು ಪ್ರದಾನ ಮಾಡಿ, ಗೌರವಿಸಿದರು. ದಾವಣಗೆರೆಯ, ವಿ.ಟಿ.ಯು. ಸ್ನಾತಕೋತ್ತರ ಅಧ್ಯಯನ ಕೇಂದ್ರದ ವಿದ್ಯಾರ್ಥಿನಿ, ಎಸ್. ಅನನ್ಯ, ಚಿನ್ನದ ಪದಕದೊಂದಿಗೆ, ಮಾಸ್ಟರ್ ಆಫ್ ಟೌನ್ ಇನ್ ಕಂಟ್ರಿ ಪ್ಲ್ಯಾನಿಂಗ್ ಸ್ನಾತಕೋತ್ತರ ಪದವಿ ಪಡೆದರು. ಪ್ರದೇಶ ಸಮಾಚಾರಕ್ಕಾಗಿ ಅವರು, ತಮ್ಮ ಖುಷಿ ವ್ಯಕ್ತ ಪಡಿಸಿದ್ದಾರೆ.**

<><><>

**ಅನನ್ಯ ಧ್ವನಿ 26 ಸೆಕೆಂದುಗಳು**

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ 11 ಗಂಟೆಗೆ, ಹೊಸ ದಿಲ್ಲಿಯ ಭಾರತ ಮಂಟಪಂನಲ್ಲಿ, 8ನೇ ಆವೃತ್ತಿಯ 'ಪರೀಕ್ಷಾ ಪೇ ಚರ್ಚೆ'ಯಲ್ಲಿ, ವಿದ್ಯಾರ್ಥಿಗಳು, ಪೋ ‘ಕರು ಮತ್ತು ಶಿಕ್ಷಕರೊಂದಿಗೆ, ಪರೀಕ್ಷಾ ಸಿದ್ಧತೆ ಹಾಗೂ ಒತ್ತಡ ನಿರ್ವಹಣೆ ಕುರಿತು, ಸಂವಾದ ನಡೆಸಲಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ 8 ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ, 36 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ.**

<><><>

ಕಾರ್ಮಿಕರ ಭವಿಷ್ಯ ನಿಧಿ ಯೋಜನೆ – ಇ.ಪಿ.ಎಫ್.ಓ. ನಲ್ಲಿ 7 ಕೋಟಿ 30 ಸಾವಿರ ಜನ, ಸಕ್ರಿಯ ಚಂದಾದಾರರಿದ್ದು, 7 ಕೋಟಿ ಜನತೆ, 'ಅಟಲ್ ಪಿಂಚಣಿ ಯೋಜನೆ'ಗೆ ಹೆಸರು ನೋಂದಾಯಿಸಿದ್ದಾರೆ ಎಂದು, ಕೇಂದ್ರ ಕಾರ್ಮಿಕ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ತಿಳಿಸಿದ್ದಾರೆ. ದೇಶದ ಕಾರ್ಮಿಕರು, ಸಾಮಾನ್ಯ ಕೆಲಸಗಾರರಿಗೂ, ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳನ್ನು ತಲುಪಿಸುವಲ್ಲಿ, ಕೇಂದ್ರ ಸರ್ಕಾರ ಬದ್ಧತೆಯಿಂದ ಕೆಸಲ ಮಾಡುತ್ತಿದೆ ಎಂದು, ಅವರು ಹೇಳಿದ್ದಾರೆ.

<><><>

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಬೆಂಬಲ ಬೆಲೆ, ಪ್ರತಿ ಕ್ವಿಂಟಲ್ ಗೆ 7 ಸಾವಿರದ 550 ರೂಪಾಯಿಗಳೊಂದಿಗೆ, ರಾಜ್ಯ ಸರ್ಕಾರದ ಪ್ರೋತ್ಸಾಹ ಧನ 450 ರೂಪಾಯಿ ಸೇರಿ ಒಟ್ಟು 8 ಸಾವಿರ ರೂಪಾಯಿ ನೀಡುವ ಬಗ್ಗೆ, ಮುಖ್ಯ ಮಂತ್ರಿಗಳು ಅನುಮೋದನೆ ನೀಡಿದ್ದು, ಸಂಬಂಧಪಟ್ಟ ಇಲಾಖೆಗೆ ತಕ್ಷಣದಿಂದ ಅನುಷ್ಠಾನಗೊಳಿಸಲು ಸೂಕ್ತ ನಿರ್ದೇಶನ ನೀಡಲಾಗಿದೆ. ರಾಜ್ಯಾದ್ಯಂತ ಒಟ್ಟು 330 ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದ್ದು, ರೈತರು ಪ್ರೋತ್ಸಾಹ ಧನದ ಸದುಪಯೋಗ ಪಡೆಯುವಂತೆ ಕೋರಲಾಗಿದೆ.

<><><>

ಸಾಹಿತಿ ನಿರಂಜನರ ಜನ್ಮ ಶತಮಾನೋತ್ಸವದ ನೆನಪಿನಲ್ಲಿ 'ನಿರಂಜನರ ಬದುಕು–ಸಾಹಿತ್ಯ ಒಂದು ಚಿಂತನೆ' ಕುರಿತ ಕಾರ್ಯಕ್ರಮವು ಇಂದು ಧಾರವಾಡದ ರಂಗಾಯಣ ಸುವರ್ಣ ಸಾಂಸ್ಕೃತಿಕ ಸಮುಚ್ಚಯದಲ್ಲಿ ಆಯೋಜಿಸಲಾಗಿದ್ದು, ಕಾರ್ಯಕ್ರಮ ಪ್ರಗತಿಯಲ್ಲಿದೆ.

<><><>

ಕರ್ನಾಟಕ ಬಯಲಾಟ ಅಕಾಡೆಮಿಯ ಕಳೆದ 2021 ರಿಂದ 2024ನೇ ಸಾಲಿನ ವರೆಗಿನ ಒಟ್ಟು ನಾಲ್ಕು ವರ್ಷಗಳ ಗೌರವ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವು ನಾಳೆ ಸಂಜೆ 5 ಗಂಟೆಗೆ ಬಾಗಲಕೋಟೆ ನವನಗರದ ಕಲಾಭವನದಲ್ಲಿ ನಡೆಯಲಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><><>

ವಚನ ಸಾಹಿತ್ಯವನ್ನು ಸಂಗೀತಕ್ಷೇತ್ರಕ್ಕೆ ಪರಿಚಯಿಸಿದ ಮೊದಲಿಗರೆಂದರೆ ಪಂಡಿತ್ ಪಂಚಾಕ್ಷರಿ ಗವಾಯಿಗಳು ಎಂದು ಕರ್ನಾಟಕ ವಿಶ್ವವಿದ್ಯಾಲಯದ ಬಸವ ಪೀಠದ ಸಂಯೋಜಕರಾದ ಸಿ.ಎಂ ಕುಂದಗೋಳ ಹೇಳಿದರು. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಗಾನಯೋಗಿ ಪಂಡಿತ್ ಪಂಚಾಕ್ಷರಿ ಗವಾಯಿಗಳ 134 ನೇ ಜಯಂತ್ಯೋತ್ಸವ ಮತ್ತು ಸಂಗೀತೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಸಹಕಾರ ಇಲಾಖೆ, 'ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆ' ಅಡಿ, ಹೊಸದಾಗಿ ಸದಸ್ಯರನ್ನು ನೊಂದಾಯಿಸಲು ಹಾಗೂ ಸದಸ್ಯತ್ವ ನವೀಕರಿಸಲು, ಮಾರ್ಚ್ 31ರ ವರೆಗೆ ಅವಕಾಶವಿದೆ ಎಂದು, ಗದಗ ಜಿಲ್ಲಾ ಸಹಕಾರ ಉಪ ನಿಬಂಧಕರು ತಿಳಿಸಿದ್ದಾರೆ

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..